# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**<u>ಓದಲಾಗಿದೆ:</u>**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/Uplok/BGM/1370/2013/PP, ದಿನಾಂಕ: 10.01.2017

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಪತ್ರದಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 05.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಅಶೋಕ್ ಆರ್.ನಿಡಗುಂದಿ ರವರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು 2009-10 ನೇ ಸಾಲಿನ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಸಾರ್ವಜನಿಕರ ಗಮನಕ್ಕೆ ತರದೆ ಮತ್ತು ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯದೆ ಕಾಮಗಾರಿಗಳನ್ನು ಕೈಗೊಂಡು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಸ್ವಚ್ಛತಾ ಅಭಿಯಾನದಡಿ ಶೌಚಾಲಯಗಳನ್ನು ನಿರ್ಮಿಸದೆ, ಶೌಚಾಲಯಗಳನ್ನು ನಿರ್ಮಿಸಿರುವುದಾಗಿ ಲೆಕ್ಕ ತೋರಿಸಿ, ನೆರೆ ಪರಿಹಾರಧನವನ್ನು ಸಹ ನೆರೆ ಸಂತ್ರಸ್ಥರಿಗೆ ಹಂಚದೆ ದುರುಪಯೋಗಪಡಿಸಿಕೊಂಡಿದ್ದು, ಫಲಾನುಭವಿಗಳಿಗೆ ಹಣವನ್ನು ನಗದಾಗಿ ನೀಡಿರುವುದಾಗಿ ದಾಖಲೆಗಳಲ್ಲಿ ತೋರಿಸಿ ದರ್ನಡತೆ ಎಸಗಿದ್ದು ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ. ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಎದುರುದಾರರಾದ ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರಾದ ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 38 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 21.01.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ ಪತ್ರದೊಂದಿಗೆ ಸಲ್ಲಿಸಲಾಗಿದ್ದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಮುದ್ದೇಬಿಹಾಳ ತಾಲ್ಲೂಕು ಪಂಚಾಯತಿ, ಮುದ್ದೇಬಿಹಾಳ, ವಿಜಯಪುರ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವುದು)
6) ಶ್ರೀ ಸಂಗಯ್ಯ ಐ.ಹಿರೇಮಠ, ಕಾರ್ಯದರ್ಶಿ, ಹಿರೇಮುರಾಳ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.